ಇ-ಮೇಲ್: drsyndicateku@gmail.com

ವೆಬ್‌ಸೈಟ್:www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

ವಿಶ್ವವಿದ್ಯಾಲಯ ಕಾರ್ಯಾಲಯ, ಜ್ಞಾನ ಸಹ್ಯಾದ್ರಿ- 577 451

ಸಂಖ್ಯೆ: ಕುವಿ:ಯುಎಟಿ-2:93B:646:2026-27

ದಿನಾಂಕ:06-04-2026

## ಸುತ್ತೋಲೆ

ವಿಷಯ : 2025-26ನೇ ಸಾಲಿನ ವಾರ್ಷಿಕ ವರದಿಯನ್ನು ಸಿದ್ಧಪಡಿಸಲು ಅಗತ್ಯ ಮಾಹಿತಿಯನ್ನು ಸಲ್ಲಿಸುವ ಕುರಿತು.

...

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ – 2000 ಪ್ರಕರಣ (50) ರ ಪ್ರಕಾರ ಕುವೆಂಪು ವಿಶ್ವವಿದ್ಯಾಲಯದ 2025-26ನೇ ಸಾಲಿನ ವಾರ್ಷಿಕ ವರದಿಯನ್ನು ಸಿದ್ಧಪಡಿಸಿ ಸೆಪ್ಟಂಬರ್ 30ರೊಳಗಾಗಿ ಸರ್ಕಾರಕ್ಕೆ ಸಲ್ಲಿಸಬೇಕಾಗಿರುತ್ತದೆ. ಇದಕ್ಕೆ ಪೂರ್ವಭಾವಿಯಾಗಿ ವಿವಿಧ ವಿಭಾಗ ಹಾಗೂ ಶಾಖೆಗಳಿಂದ ಸ್ವೀಕೃತವಾದ ವಾರ್ಷಿಕ ವರದಿಯ ಮಾಹಿತಿಗಳನ್ನು ಕ್ರೋಢೀಕರಿಸಿ ವಾರ್ಷಿಕ ವರದಿಯನ್ನು ಸಿದ್ಧಪಡಿಸಿ ಮುಂಬರುವ ವಿದ್ಯಾವಿಷಯಕ ಪರಿಷತ್ ಹಾಗೂ ಸಿಂಡಿಕೇಟ್ ಸಭೆಗೆ ಅನುಮೋದನೆಗಾಗಿ ಮಂಡಿಸಬೇಕಾಗಿರುತ್ತದೆ. ಆದ್ದರಿಂದ ಪ್ರತಿ ವಿಭಾಗದವರು ವಾರ್ಷಿಕ ವರದಿಗೆ ಸಂಬಂಧಿಸಿದ ಮಾಹಿತಿಯನ್ನು (ದಿನಾಂಕ:01-04-2025 ರಿಂದ ದಿನಾಂಕ:31-03-2026 ರವರೆಗೆ) ಆದ್ಯತೆ ಮೇರೆಗೆ ಪರಿಗಣಿಸಿ, ಸಿದ್ಧಪಡಿಸಿದ ಮಾಹಿತಿಯನ್ನು ನಿಗಧಿತ ನಮೂನೆಯಲ್ಲಿ ಸಲ್ಲಿಸಲು ತಿಳಿಸಲಾಗಿದೆ.

ಆದ್ದರಿಂದ ತಮ್ಮ ವಿಭಾಗಕ್ಕೆ ಸಂಬಂಧಿಸಿದ ಮಾಹಿತಿಗಳನ್ನು ವಿಶ್ವವಿದ್ಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿರುವ ನಿಗಧಿತ ನಮೂನೆಯನ್ನು ಡೌನ್‌ಲೋಡ್ ಮಾಡಿಕೊಂಡು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಸಿದ್ಧಪಡಿಸಿ, ಪ್ರಾಧಿಕಾರ ವಿಭಾಗದ ಇ-ಮೇಲ್ ವಿಳಾಸಕ್ಕೆ (drsyndicateku@gmail.com) ಗೆ Soft ಮತ್ತು Hard Copy ಯಲ್ಲಿ **ದಿನಾಂಕ:19-05-2025ರ** ಒಳಗಾಗಿ ತಪ್ಪದೇ ಕಳುಹಿಸಿಕೊಡಲು ಸೂಚಿಸಲಾಗಿದೆ.

**ವಿಶೇಷ ಸೂಚನೆಗಳು :**

1. ವಾರ್ಷಿಕ ವರದಿಯು ದಿನಾಂಕ:01-04-2025 ರಿಂದ ದಿನಾಂಕ:31-03-2026ರ ಅವಧಿಯದ್ದಾಗಿರುತ್ತದೆ.
2. ಕನ್ನಡ ಹಾಗೂ ಆಂಗ್ಲ ಭಾಷೆಯಲ್ಲಿ ತಮ್ಮ ವಿಭಾಗಕ್ಕೆ ಸಂಬಂಧಿಸಿದ ವಾರ್ಷಿಕ ವರದಿಯನ್ನು ಸಿ.ಡಿಯಲ್ಲಿ ಕ್ರೋಢೀಕರಿಸಿ ಮುದ್ರಿಸಿದ ವರದಿಯನ್ನು **Hard Copy & Soft Copy** ಯ ಪ್ರತಿಯನ್ನು ಪ್ರಾಧಿಕಾರಗಳ ವಿಭಾಗಕ್ಕೆ ಇ-ಮೇಲ್ ಮುಖಾಂತರ ಕಳುಹಿಸುವುದು.
3. *ಕನ್ನಡ ವಾರ್ಷಿಕ ವರದಿಯು ನುಡಿ(ಒಣಜು 01ಜ) ಫಾಂಟ್ ಸೈಜ್ 12ರಲ್ಲಿಯೇ ಇರತಕ್ಕದ್ದು.*
4. *ಇಂಗ್ಲೀಷ್ ವಾರ್ಷಿಕ ವರದಿಯು* **Times New Roman,** *ಫಾಂಟ್ ಸೈಜ್ 12ರಲ್ಲಿಯೇ ಇರತಕ್ಕದ್ದು.*
5. *ವಾರ್ಷಿಕ ವರದಿಯು ಎ4 ಹಾಗೂ ಪೋರ್ಟ್‌ರೇಟ್ ಅಳತೆಯಲ್ಲಿ ಇರತಕ್ಕದ್ದು.*
6. *ಪ್ರತಿ ವಿಭಾಗಕ್ಕೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ಸಿದ್ಧಪಡಿಸಿದ ನಿಗದಿತ ನಮೂನೆಯನ್ನು ವಿಶ್ವವಿದ್ಯಾಲಯದ ಅಂತರ್‌ಜಾಲ* **www.kuvempu.ac.in** *ನಲ್ಲಿ ಪ್ರಕಟಿಸಲಾಗಿದೆ.*

ಕುಲಸಚಿವರು

ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನಸಹ್ಯಾದ್ರಿ
ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ.

ಗೆ,

1) ಕುಲಸಚಿವರು (ಮೌಲ್ಯಮಾಪನ), ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
2) ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
3) ನಿರ್ದೇಶಕರು: ಯೋಜನೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಂಡಳಿ/ ಕಾಲೇಜು ಅಭಿವೃದ್ಧಿ ಪರಿಷತ್/ಶಾರೀರಿಕ ಶಿಕ್ಷಣ/ವಿದ್ಯಾರ್ಥಿ ಕ್ಷೇಮಪಾಲನಾ/ಕ್ರೀಡಾ ವಿಭಾಗ/ಸಂಶೋಧನಾ ಮತ್ತು ಅಭಿವೃದ್ಧಿ ಘಟಕ/ ಪ್ರಸಾರಾಂಗ/ ದೂರಶಿಕ್ಷಣ ನಿರ್ದೇಶನಾಲಯ/ ಅಂತರಾಷ್ಟ್ರೀಯ ವಿದ್ಯಾರ್ಥಿ ಘಟಕ /ಐ.ಕ್ಯೂ.ಎ.ಸಿ. ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
4) ಸಂಚಾಲಕರು, ಯು.ಸಿ.ಸಿ.ಎಫ್. ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ, ವಿಶ್ವವಿದ್ಯಾಲಯದ ವೆಬ್‌ಸೈಟ್‌ನಲ್ಲಿ ಸುತ್ತೋಲೆಯಲ್ಲಿರುವ ಮಾಹಿತಿಯನ್ನು ಸೇರ್ಪಡಿಸುವುದು/ ಬದಲಾಯಿಸುವುದು.
5) ಉಪಕುಲಸಚಿವರು, ಮಾನವ ಸಂಪನ್ಮೂಲ ಮತ್ತು ನಿರ್ವಹಣಾ ವಿಭಾಗ/ಶೈಕ್ಷಣಿಕ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
6) ಕಾರ್ಯಪಾಲಕ ಅಭಿಯಂತರರು, ಇಂಜಿನಿಯರಿಂಗ್ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
7) ಶಿಕ್ಷಕ ಸಲಹೆಗಾರರು, ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿ ನಿಲಯಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
8) ಸಂಯೋಜನಾಧಿಕಾರಿಗಳು, ಮಹಿಳಾ ಅಧ್ಯಯನ ಕೇಂದ್ರ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
9) ಸಂಯೋಜನಾಧಿಕಾರಿಗಳು, ರಾಷ್ಟ್ರೀಯ ಸೇವಾ ಯೋಜನಾ ಘಟಕ ಕುವೆಂಪು ವಿಶ್ವವಿದ್ಯಾಲಯ, ನಗರ ಕಛೇರಿ, ಶಿವಮೊಗ್ಗ.
10) ಸಂಯೋಜನಾಧಿಕಾರಿಗಳು, ನ್ಯಾಷನಲ್ ಕ್ರೆಡೆಟ್ ಕಾರ್ಪ್ಸ್/ ಯೂತ್ ರೆಡ್‌ಕ್ರಾಸ್, ಸಹ್ಯಾದ್ರಿ ಕಾಲೇಜು, ಶಿವಮೊಗ್ಗ.
11) ನಿರ್ದೇಶಕರು, ಕುವೆಂಪು ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರ, ಬಿ.ಹೆಚ್. ರಸ್ತೆ. ಕಡೂರು/ ಐ.ಡಿ.ಎಸ್.ಜಿ. ಕಾಲೇಜು ಆವರಣ, ಚಿಕ್ಕಮಗಳೂರು.
12) ಸಂಚಾಲಕರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಘಟಕ/ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಘಟಕ/ಪಠ್ಯೇತರ ಚಟುವಟಿಕೆ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
13) ಗ್ರಂಥಪಾಲಕರು, ವಿಶ್ವವಿದ್ಯಾಲಯ ಗ್ರಂಥಾಲಯ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
14) ಅಧ್ಯಕ್ಷರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಜ್ಞಾನಸಹ್ಯಾದ್ರಿ, ಶಂಕರಘಟ್ಟ, ಶಿವಮೊಗ್ಗ / ಕಡೂರು / ಚಿಕ್ಕಮಗಳೂರು.
15) ಆಪ್ತಕಾರ್ಯಾಲಯ: ಕುಲಪತಿಗಳು: ಕುಲಸಚಿವರು: ಕುಲಸಚಿವರು (ಮೌಲ್ಯಮಾಪನ): ಹಣಕಾಸು ಅಧಿಕಾರಿಗಳು. ಕುವೆಂಪು ವಿಶ್ವವಿದ್ಯಾಲಯ. ಶಂಕರಘಟ್ಟ
16) ಕಛೇರಿ ಪ್ರತಿ.